**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಎಸ್. ಎಲ್ ಭೋಜೇಗೌಡ ಇವರು ಮಂಡಿಸಿರುವ ನಿಯಮ-72 ಕ್ಕೆ ಉತ್ತರ**

**ವಿಷಯ:-**

**ಸಮಾಜದಲ್ಲಿ ಶಿಕ್ಷಕರಿಗೆ ಮಹತ್ತರವಾದ ಹಾಗೆ ಗೌರವಯುತವಾದ ಸ್ಥಾನವಿದ್ದು, ಬೋಧನಾ ಕಾರ್ಯಗಳನ್ನು ಹೊರತುಪಡಿಸಿ ಅನ್ಯಕಾರ್ಯಗಳಿಗೆ ನಿಯೋಜಿಸುವುದು ಸೂಕ್ತವಲ್ಲ. ಶಿಕ್ಷಣಕ್ಷೇತ್ರವನ್ನು ಹೊರತುಪಡಿಸಿ ಉಳಿದ ಯಾವುದೇ ಕ್ಷೇತ್ರದಲ್ಲಿ ಅವರನ್ನು ತೊಡಗಿಸುವುದು ಶಿಕ್ಷಕರ ವೃತ್ತಿಗೆ ಅಪಮಾನ. ಶಿಕ್ಷಕರನ್ನು ಶಿಕ್ಷಣ ಕ್ಷೇತ್ರಕ್ಕೆ ಸೀಮಿತಗೊಳಿಸುವುದರಿಂದ ಶಿಕ್ಷಣದ ಗುಣಮಟ್ಟ ಅಭಿವೃದ್ಧಿಯಾಗುವುದರಲ್ಲಿ ಯಾವುದೇ ಸಂಶಯವಿಲ್ಲ, ಪ್ರೌಢಶಾಲೆಗಳ ಶಿಕ್ಷಕರನ್ನು ಅನ್ಯಕಾರ್ಯಗಳಿಗೆ ನಿಯೋಜಿಸುತ್ತಿರುವುದರಿಂದ ಇತ್ತೀಚಿನ ದಿನಗಳಲ್ಲಿ ಶಿಕ್ಷಣದ ಗುಣಮಟ್ಟ ಸಂಪೂರ್ಣವಾಗಿ ನೆಲಕಚ್ಚಿದೆ. ಶಿಕ್ಷಣ ಇಲಾಖೆಯ ನೌಕರರನ್ನು ಹೊರತುಪಡಿಸಿ ಉಳಿದ ಇಲಾಖೆಯ ನೌಕರರನ್ನು ಅನ್ಯಕಾರ್ಯಗಳಿಗೆ ಬಳಸಿಕೊಂಡು ಶಿಕ್ಷಕರನ್ನು ಶಿಕ್ಷಣಕ್ಷೇತ್ರಕ್ಕೆ ಮಾತ್ರ ಸೀಮಿತಗೊಳಿಸುವ ಬಗ್ಗೆ ಸರ್ಕಾರದಿಂದ ಆದೇಶಿಸುವ ಕುರಿತ ವಿಷಯದ ಬಗ್ಗೆ ಪ್ರಸ್ತಾಪಿಸಿರುತ್ತಾರೆ.**

**ಉತ್ತರ:**

ಜಂಟಿ ಮುಖ್ಯ ಚುನಾವಣಾಧಿಕಾರಿಗಳು(ಸಿಆಸುಇ) ಇವರ ಪತ್ರ ಸಂಖ್ಯೆ:ಸಿಆಸುಇ 54 ಚುಮಪ 2021 ದಿ:03.08.2023 ರಲ್ಲಿ ಹೊರಡಿಸಲಾದ ಪತ್ರದನ್ವಯ ಶಿಕ್ಷಕರನ್ನು ಚುನಾವಣಾ ಕಾರ್ಯಕ್ಕೆ ನಿಯೋಜಿಸಲು ಭಾರತ ಚುನಾವಣಾ ಆಯೋಗದ ಮತದಾರರ ಪಟ್ಟಿಗಳ ಕೈಪಿಡಿ ಅಕ್ಟೋಬರ್ 2016 ರ ಅಧ್ಯಾಯ-5ರ ಪ್ಯಾರಾ 5.2 ಮತಗಟ್ಟೆ ಮಟ್ಟದ ಅಧಿಕಾರಿಗಳ ನಿಯೋಜನೆಗೆ 13 ವಿವಿಧ ಹುದ್ದೆಗಳ ವಿವರ ನೀಡಲಾಗಿರುತ್ತದೆ ಹಾಗೂ ತೀರಾ ಅನಿವಾರ್ಯ ಸಂದರ್ಭಗಳಲ್ಲಿ ಕೆಲವೊಂದು ಷರತ್ತಿನ ಮೇರೆಗೆ ಕಾರ್ಯಗಳನ್ನು ನಿರ್ವಹಿಸಲು ಸೂಚಿಸಲಾಗಿರುತ್ತದೆ.

ಮುಂದುವರೆದು ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸುತ್ತೋಲೆ ಸಂಖ್ಯೆ: KARC-2/1/48/2025 ದಿನಾಂಕ:01.07.2025 ರಲ್ಲಿ ಯಾವುದೇ ಶಿಕ್ಷಕರನ್ನು/ಶಾಲಾ ಮುಖ್ಯೋಪಾಧ್ಯಾಯರನ್ನು ಶಾಲಾ ದಿನಗಳಲ್ಲಿ ಯಾವುದೇ ಇತರೆ ಚಟುವಟಿಕೆಗಳಿಗೆ ನಿಯೋಜಿಸದಂತೆ ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ನಿರ್ವಹಣಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಹಾಗೂ ಶಿಕ್ಷಕರುಗಳು ಸಂಪೂರ್ಣವಾಗಿ ಶಾಲೆಯಲ್ಲಿ ಹಾಜರಿದ್ದು, ವಿದ್ಯಾರ್ಥಿಗಳು ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳಿಂದ ವಂಚಿತರಾಗುವುದನ್ನು ತಡೆಗಟ್ಟುವ ಬಗ್ಗೆ ಸ್ಪಷ್ಟವಾದ ಸೂಚನೆಗಳನ್ನು ನೀಡಲಾಗಿದೆ.

**ಸಂಖ್ಯೆ: ಇಪಿ 37 ಎಲ್‌ಬಿಪಿ 2026**

**(ಎಸ್ ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು**